# ಸ್ಪರ್ಧಾತ್ಮಕ ಪರೀಕ್ಷೆಗಳ ಕಾರ್ಯಗಾರ

ಸಕಲೇಶಪುರ ಜೆಎಸ್ಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ (ಬಿ.ಇಡಿ ಕಾಲೇಜು) 2022-23 ನೇ ಸಾಲಿನ ಪ್ರಥಮ ಹಾಗೂ ಮೂರನೇ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳಿಗೆ **23 ಮಾರ್ಚ್ 2023 ರಂದು ಸ್ಪರ್ಧಾತ್ಮಕ ಪರೀಕ್ಷೆಗಳ ಕಾರ್ಯಗಾರವನ್ನು** ಆಯೋಜಿಸಲಾಗಿತ್ತು. ಪ್ರಶಿಕ್ಷಣಾರ್ಥಿಗಳಿಗೆ **ಟಿಇಟಿ, ಸಿಇಟಿ ಹಾಗೂ ಇನ್ನಿತರ ಸ್ಪರ್ಧಾತ್ಮಕ ಪರೀಕ್ಷೆಗಳ ಪೂರ್ವತಯಾರಿ, ಅಧ್ಯಯನ ಸಾಮಗ್ರಿ ಆಯ್ಕೆ, ವಿವಿಧ ಹುದ್ದೆಗಳಿಗೆ ಅರ್ಜಿ ಹಾಕುವ ವಿಧಾನ, ಪಠ್ಯಕ್ರಮಕ್ಕೆ ಅನುಗುಣವಾಗಿ ಓದುವುದು, ವಿಷಯಕ್ಕೆ ತಕ್ಕಂತೆ ಸಮಯ ಜೋಡಣೆ, ಹಳೆಯ ಪ್ರಶ್ನೆ ಪತ್ರಿಕೆ ಬಿಡಿಸುವ ವಿಧಾನ**ಗಳನ್ನು ತಿಳಿಸಿಕೊಡುವುದು ಇದರ ಮುಖ್ಯ ಉದ್ದೇಶವಾಗಿತ್ತು.



ಸಹಾಯಕ ಪ್ರಾಧ್ಯಾಪಕರು ಹಾಗೂ ಕಾರ್ಯಕ್ರಮದ ಸಂಯೋಜಕರಾದ ಡಾ. ದಿನೇಶ್ ಎಂ. ಕೆ ರವರು ಕಾರ್ಯಗಾರಕ್ಕೆ ಆಗಮಿಸಿದ ಸಂಪನ್ಮೂಲ ವ್ಯಕ್ತಿಗಳನ್ನು ಪರಿಚಯಿಸಿ ಎಲ್ಲರನ್ನೂ ಆತ್ಮೀಯವಾಗಿ ಸ್ವಾಗತಿಸಿ ಸ್ಪರ್ಧಾತ್ಮಕ ಜಗತ್ತಿನಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿಯಾಗಲು ಕಠಿಣ ಪರಿಶ್ರಮ, ಪೂರ್ವ ಸಿದ್ಧತೆ ಹಾಗೂ ಸೂಕ್ತ ಮಾರ್ಗದರ್ಶನದ ಅವಶ್ಯಕತೆ ಇದೆ ಎಂದು ತಮ್ಮ ಪ್ರಾಸ್ತಾವಿಕ ನುಡಿಗಳಲ್ಲಿ ತಿಳಿಸಿದರು.

ಕಾರ್ಯಕ್ರಮದ ಮೊದಲ ಅಧಿವೇಶನದಲ್ಲಿ **ಟಿಇಟಿ, ಸಿಇಟಿ ಅಭ್ಯಾಸ ಪತ್ರಿಕೆ ಹಾಗೂ ಇತಿಹಾಸ** ವಿಷಯದ ಕುರಿತಾಗಿ ಉಪನ್ಯಾಸ ನೀಡಲು ಆಗಮಿಸಿದ **ವಿಸ್ಮಯ ವಿಜೇತ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಹಾಸನ ಜಿಲ್ಲಾ ಸಹ ಪ್ರಧಾನ ಸಂಪಾದಕರಾದ ಕುಮಾರಿ ವಿನಯ ಆರ್** ರವರು ಬದುಕಿನಲ್ಲಿ ಎಲ್ಲರೂ ಉನ್ನತ ಮಟ್ಟದ ಗುರಿಯನ್ನು ಹೊಂದಿರಬೇಕು ಹಾಗೂ ಆ ಗುರಿಯನ್ನು ಮುಟ್ಟಲು ಸತತ ಪ್ರಯತ್ನವನ್ನು ನಡೆಸುತ್ತಿರಬೇಕು ಎಂದು ತಿಳಿಸುತ್ತಾ ಟಿಇಟಿ ಹಾಗೂ ಸಿಇಟಿಯ ಪಠ್ಯ ಕ್ರಮ, ಅಂಕಗಳ ಹಂಚಿಕೆ, ಪ್ರಶ್ನೆ ಪತ್ರಿಕೆ ವಿನ್ಯಾಸದ ಕುರಿತಾಗಿ ಸಂಪೂರ್ಣ ಮಾಹಿತಿ ನೀಡಿದರು.






ಕಾರ್ಯಕ್ರಮದಲ್ಲಿ **ಸಾಮಾಜ್ಯ ಜ್ಞಾನ, ಭಾರತದ ಸಂವಿಧಾನ ಹಾಗೂ ಭೂಗೋಳಶಾಸ್ತ್ರದ ಕುರಿತಾಗಿ ವಿಶೇಷ ಉಪನ್ಯಾಸ ನೀಡಲು ಆಗಮಿಸಿದ ಶ್ರೀ ಶಿವಕುಮಾರ ಶೆಟ್ಟಿಹಳ್ಳಿ** ರವರು ಪ್ರಶಿಕ್ಷಣಾರ್ಥಿಗಳಿಗೆ ಎಲ್ಲರೂ ಧನಾತ್ಮಕವಾಗಿ ಚಿಂತಿಸಿ ಧನಾತ್ಮಕ ಆತ್ಮಸ್ಥೈರ್ಯವನ್ನು ಬೆಳೆಸಿಕೊಳ್ಳಿ ಎಂದು ತಿಳಿಸುತ್ತಾ ಶಿಕ್ಷಕರು ವಿಭಿನ್ನವಾದ ಶೈಲಿಯಲ್ಲಿ ಬೋಧಿಸಬೇಕು, ಹೊಸ ಹೊಸ ತಂತ್ರಜ್ಞಾನಗಳ ಬಳಕೆಯಲ್ಲಿ ನಿಪುಣರಾಗಬೇಕು ಮತ್ತು ಬೋಧಿಸುವ ವಿಷಯವನ್ನು ಪ್ರೀತಿಸಬೇಕು ಹಾಗೂ ವಿಷಯದ ಕುರಿತಾಗಿ ಪ್ರಭುತ್ವ ಹೊಂದಿರಬೇಕು ಹಾಗಾದಾಗ ಮಾತ್ರ ಪರಿಣಾಮಕಾರಿಯಾಗಿ ಬೋಧಿಸಲು ಸಾಧ್ಯ ಎಂದು ತಿಳಿಸುತ್ತಾ ಸಾಮಾನ್ಯ ಜ್ಞಾನ ಕುರಿತಾಗಿ ಜ್ಞಾನ ವೃದ್ಧಿಸಿಕೊಳ್ಳಲು ಯಾವ ವಿಷಯಗಳನ್ನು ಓದಬೇಕು, ಚಿತ್ರಗಳನ್ನು ಬರೆದು ಮುಖ್ಯಾಂಶಗಳನ್ನು ನೆನಪಿನಲ್ಲಿಟ್ಟುಕೊಳ್ಳುವುದು ಹೇಗೆ ಎಂಬುದನ್ನು ವಿವರವಾಗಿ ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ. ನಂಜುಂಡಪ್ಪ ಎಸ್ ರವರು ಮಾತನಾಡುತ್ತಾ, ಕ್ರಮಬದ್ಧವಾಗಿ ಅಧ್ಯಯನ ನಡೆಸಿದಾಗ ಮಾತ್ರ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿಯಾಗಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಥಮ ಹಾಗೂ ಮೂರನೇ ಸೆಮಿಸ್ಟರ್ ಪ್ರಶಿಕ್ಷಣಾರ್ಥಿಗಳು, ಬೋಧಕ ಹಾಗೂ ಬೋಧಕೇತರ ಉಪಸ್ಥಿತರಿದ್ದರು.

***** - *****

PRINCIPAL
J.S.S. Institute of Education
P.B. 26, SAKALESHPUR-573 134
Hassan Dist